# ಗೃಹ ಲಕ್ಷ್ಮಿ ಯೋಜನೆ

1. ಗೃಹ ಲಕ್ಷ್ಮಿ ಯೋಜನೆಯಡಿ ಫಲಾನುಭವಿಯ ನೊಂದಣಿ ದಿನಾಂಕ: 14 or 16.07.2023 ರಿಂದ ಆರಂಭಿಸಲಾಗುವುದು.

2. ಈಗಾಗಲೇ ತಿಳಿಸಿರುವಂತೆ ಪಡಿತರ ಚೀಟಿಯಲ್ಲಿ "ಯಜಮಾನಿ ಮಹಿಳೆ" ಎಂದು ಗುರುತಿಸಿರುವ ಮಹಿಳೆಯು ಈ ಯೋಜನೆಯ ಫಲಾನುಭವಿಯಾಗುತ್ತಾರೆ. ಆದರೆ ಫಲಾನುಭವಿ ಯಜಮಾನಿ ಮಹಿಳೆ ಅಥವಾ ಆಕೆಯ ಪತಿ ಆದಾಯ ತೆರಿಗೆ ಅಥವಾ ಜಿ.ಎಸ್.ಟಿ. ಪಾವತಿದಾರರಾಗಿರತಕ್ಕದ್ದಲ್ಲ.

3. ಫಲಾನುಭವಿಯು ನೊಂದಣಿಯನ್ನು 2 ಮಾರ್ಗದಿಂದ / ರೀತಿಯಿಂದ ಮಾಡಿಸಬಹುದಾಗಿದೆ.

   i) ಮೊದಲನೆಯದಾಗಿ ಈಗಾಗಲೇ ರೇಷನ್ ಕಾರ್ಡಿನಲ್ಲಿ ಗುರುತಿಸಲಾಗಿರುವ ಪ್ರತಿಯೊಬ್ಬ ಯಜಮಾನಿ ಮಹಿಳೆಗೂ ದಿನಾಂಕ, ಸಮಯ ಹಾಗೂ ನೊಂದಾವಣಿ ಮಾಡಿಸುವ ಸ್ಥಳದ ವಿವರಗಳನ್ನು ತಿಳಿಸಲಾಗುವುದು.

   ಗ್ರಾಮಾಂತರ ಪ್ರದೇಶದಲ್ಲಿ ಅವರು ವಾಸಿಸುವ ಗ್ರಾಮದ ಸಮೀಪವಿರುವ ಗ್ರಾಮ-ಒನ್ ಕೇಂದ್ರ ಅಥವಾ ಬಾಪೂಜಿ ಸೇವಾ ಕೇಂದ್ರವಾಗಿರುತ್ತದೆ. ಹಾಗೆಯೇ ನಗರ ಪ್ರದೇಶದಲ್ಲಿ ಅವರ ಸಮೀಪವಿರುವ ಕರ್ನಾಟಕ-ಒನ್ ಅಥವಾ ಬೆಂಗಳೂರು-ಒನ್ ಕೇಂದ್ರವಾಗಿರುತ್ತದೆ.

   ii) ಪರ್ಯಾಯವಾಗಿ "ಪ್ರಜಾಪ್ರತಿನಿಧಿ" (ಸರ್ಕಾರದಿಂದ ಗುರುತಿಸಲ್ಪಟ್ಟ ಸ್ವಯಂ ಸೇವಕರು) ತಮ್ಮ ಮನೆಗೆ ಭೇಟಿ ನೀಡಿದಾಗ ಅವರಿಂದಲೂ ಸಹ ನೊಂದಾಯಿಸಿ ಕೊಳ್ಳಬಹುದು.

Scanned with CamScanner

4. ಪ್ರತಿ ಫಲಾನುಭವಿಯ ನೋಂದಾವಣಿಗೆ ನಿಗದಿ ಮಾಡಿರುವ ದಿನಾಂಕ, ಸಮಯ, ಮತ್ತು ಸ್ಥಳವನ್ನು 1902ಗೆ ಕಾಲ್ ಮಾಡಿ ಅಥವಾ 8147500500 ನಂಬರ್‌ಗೆ SMS / ವಾಟ್ಸ್ ಆಪ್ ಮೂಲಕ ಸಂದೇಶ ಕಳುಹಿಸಿ ಮಾಹಿತಿ ಪಡೆಯಬಹುದಾಗಿದೆ.

5. ಒಂದು ವೇಳೆ ನಿಗದಿಪಡಿಸಿದ ದಿನಾಂಕ ಮತ್ತು ಸಮಯದಂದು ಗ್ರಾಮ್-ಒನ್ / ಬಾಪೂಜಿ ಕೇಂದ್ರ / ಕರ್ನಾಟಕ-ಒನ್ / ಬೆಂಗಳೂರು-ಒನ್ ಕೇಂದ್ರಗಳಿಗೆ ಹೋಗಲು ಸಾಧ್ಯವಾಗದೇ ಇದ್ದಲ್ಲಿ, ಅದೇ ಸೇವಾ ಕೇಂದ್ರಗಳಿಗೆ ಮುಂದಿನ ಯಾವುದೇ ದಿನಾಂಕದಂದು ಸಂಜೆ 5 ರಿಂದ 7 ಗಂಟೆಯೊಳಗೆ ಭೇಟಿ ನೀಡಿ ನೋಂದಾಯಿಸಿಕೊಳ್ಳಬಹುದಾಗಿದೆ.

6. ಯೋಜನೆಯಡಿ ನೋಂದಾಯಿಸಿಕೊಳ್ಳಲು ಪಡಿತರ ಚೀಟಿ ಸಂಖ್ಯೆ, ಆಧಾರ್ ಕಾರ್ಡ್ ಸಂಖ್ಯೆ ಮತ್ತು ಬ್ಯಾಂಕ್ ಖಾತೆಯ ಪಾಸ್ ಬುಕ್ (ಆಧಾರ್ ನಂಬರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆ ಹೊರತುಪಡಿಸಿ ಪರ್ಯಾಯ ಬ್ಯಾಂಕ್ ಖಾತೆಗೆ ಹಣ ವರ್ಗಾವಣೆ ಬಯಸಿದಲ್ಲಿ ಸದರಿ ಬ್ಯಾಂಕ್ ಖಾತೆಯ ಪಾಸ್ ಬುಕ್) ಮಾಹಿತಿ ಅಗತ್ಯವಿರುತ್ತದೆ.

7. ಗ್ರಾಮ್-ಒನ್ / ಬಾಪೂಜಿ ಕೇಂದ್ರ / ಕರ್ನಾಟಕ- ಒನ್ / ಬೆಂಗಳೂರು ಒನ್ ಕೇಂದ್ರಗಳಲ್ಲಿ ನೋಂದಾಯಿಸಿಕೊಂಡಾಗ ಮಂಜೂರಾತಿ ಪತ್ರವನ್ನು ಕೂಡ ನೀಡಲಾಗುವುದು.

8. ಪ್ರಜಾಪ್ರತಿನಿಧಿ ಮೂಲಕ ನೋಂದಾಯಿಸಿಕೊಂಡಲ್ಲಿ ಮಂಜೂರಾತಿ ಪತ್ರವನ್ನು ತದನಂತರ ತಮ್ಮ ಮನೆಗೆ ತಲುಪಿಸಲಾಗುವುದು.

9. ಮೇಲಿನಂತೆ ಪ್ರಜಾಪ್ರತಿನಿಧಿ ಮೂಲಕ ಅಥವಾ ಗ್ರಾಮ್-ಒನ್ / ಬಾಪೂಜಿ ಕೇಂದ್ರ / ಕರ್ನಾಟಕ- ಒನ್ / ಬೆಂಗಳೂರು ಒನ್ ಕೇಂದ್ರಗಳಲ್ಲಿ ನೋಂದಾಯಿಸಿಕೊಂಡಲ್ಲಿ, ಅರ್ಜಿದಾರರು ನೀಡಿದ ಮೊಬೈಲ್ ಸಂಖ್ಯೆಗೆ SMS ಮೂಲಕ ಮಂಜೂರಾತಿ ಬಗ್ಗೆ ಸಂದೇಶ ರವಾನಿಸಲಾಗುವುದು.

Scanned with CamScanner

10. ಒಂದು ವೇಳೆ ಫಲಾನುಭವಿಯು ಗ್ರಾಮ್-ಒನ್ / ಬಾಪೂಜಿ ಕೇಂದ್ರ / ಕರ್ನಾಟಕ-ಒನ್ / ಬೆಂಗಳೂರು-ಒನ್ ಕೇಂದ್ರಗಳಲ್ಲಿ ನೊಂದಾಯಿಸಿ ಕೊಂಡಿದಲ್ಲಿ, ಆನಂತರ ಪ್ರಜಾ ಪ್ರತಿನಿಧಿ ಅವರ ಮನೆಗೆ ಭೇಟಿ ನೀಡಿ ನೊಂದಾಯಿಸಲು ಪ್ರಯತ್ನಿಸಿದರೆ ಈಗಾಗಲೇ ನೊಂದಾಯಿಸಿರುವ ಮಾಹಿತಿ ವ್ಯಕ್ತವಾಗುತ್ತದೆ.

11. ಈಗಾಗಲೇ ಆಧಾರ್ ಜೋಡಣೆಯಾಗಿರುವ ಫಲಾನುಭವಿಯ ಖಾತೆಗೆ ಮಾಹೆಯಾನ ರೂ.2000/-ಗಳನ್ನು ಡಿ.ಬಿ.ಟಿ. ಮೂಲಕ ಜಮೆ ಮಾಡಲಾಗುವುದು. ಒಂದು ವೇಳೆ ಫಲಾನುಭವಿಗಳು ಇಚ್ಛಿಸಿದಲ್ಲಿ ಪರ್ಯಾಯ ಬ್ಯಾಂಕ್ ಖಾತೆಯನ್ನು ನೀಡಬಹುದಾಗಿರುತ್ತದೆ. ಸದರಿ ಬ್ಯಾಂಕ್ ಖಾತೆಗೆ ಮಾಹೆಯಾನ ರೂ.2000/-ಗಳನ್ನು ಆರ್.ಟಿ.ಜಿ.ಎಸ್. ಮೂಲಕ ಜಮೆ ಮಾಡಲಾಗುವುದು.

12. ಈ ಯೋಜನೆಯಡಿ ಫಲಾನುಭವಿಯು ಯಾವುದೇ ಶುಲ್ಕವನ್ನು ಪಾವತಿಸತಕ್ಕದ್ದಲ್ಲ.

13. ಈ ಯೋಜನೆಯಡಿ ನೊಂದಾಯಿಸಿಕೊಳ್ಳುವ ಪ್ರಕ್ರಿಯೆ ಉಚಿತ ವಾಗಿರುತ್ತದೆ.

14. ಈ ಯೋಜನೆಯಡಿ ಯಾವುದೇ ಅಂತಿಮ ದಿನಾಂಕ ಮತ್ತು ಸಮಯವನ್ನು ನಿಗದಿಪಡಿಸಿರುವುದಿಲ್ಲ. ಆದ್ದರಿಂದ ಒಂದು ವೇಳೆ ನಿಗದಿತ ದಿನಾಂಕ / ಸಮಯಕ್ಕೆ ನೊಂದಾಯಿಸಿಕೊಳ್ಳಲು ಸಾಧ್ಯವಾಗದೇ ಇದ್ದಲ್ಲಿ ಮುಂದೆ ಯಾವುದೇ ದಿನಾಂಕ / ಸಮಯದಲ್ಲಿ ನೊಂದಾಯಿಸಿಕೊಳ್ಳಬಹುದಾಗಿದೆ.

Scanned with CamScanner

# GRUHALAKSHMI SCHEME

1. The registration as beneficiary under the scheme will be from 14 or 16/7/2023

2. As already notified the female head of the family in the ration card will be the eligible beneficiary. However, the female head of the family or her husband should not be Income Tax or GST payee.

3. Registration can be done in any of the 2 ways.

   (i) Each ration card holder who is the female head of the family will be indicated a date, time and venue to register. On the indicated date, time and venue the person has to visit and register.

   In rural areas it will be in the nearest Grama-one or Bapuji Seva Kendra. In Urban areas, it will be nearest Karnataka-one or Bangalore-one centre.

   (ii) Alternately, a "Praja Pratinidhi" (or citizen volunteer identified by the Govt.,) will visit every hold and register.

Scanned with CamScanner

4. The date, time and venue for registration can be enquired by calling 1902 or sending SMS / Whatsapp message to 8147500500.

5. In case, the beneficiary is unable to visit Grama-one / Bapuji Seva Kendra / Karnataka-one / Bangalore-one service centres on the designated date and time, the beneficiary may visit same centre on the same day or any other day between 5 p.m. and 7 p.m.

6. The beneficiary has to provide the ration card number, Aadhar card number and Bank account details with pass book (if the beneficiary desires to receive the scheme amount into a bank account other than the bank account linked to her Aadhar number) during registration.

7. Sanction certificate will be issued after registration in Grama-one / Bapuji Seva Kendra / Karnataka-one / Bangalore-one service centres.

8. In case registration is done by Praja Pratinidhi, the sanction certificate will be provided later at the door step of the beneficiary.

Scanned with CamScanner

9. In case of registration either by Praja Pratinidhi or at any of the service centres, a text message indicating sanction is sent by SMS to the applicant's mobile number provided during registration.

10. In case the registration is already done by Grama-one / Bapuji Seva Kendra / Karnataka-one / Bangalore-one centres and the Praja Pratinidhi tries to register, the system shows that the applicant is already registered.

11. The cash benefit of Rs. 2000/- will be transferred through DBT every month to the bank account which is linked to the Aadhar number of the beneficiary. In case beneficiary desires, the beneficiary may provide a new bank account to which Rs. 2000/- will be transferred through RTGS.

12. There is no need to pay any fees for registration.

13. All registration processes will be free of cost.

Scanned with CamScanner

14. There is no last date fixed for registration under the scheme. Hence the beneficiary may register at any time in future.

Scanned with CamScanner

# ಗೃಹಲಕ್ಷ್ಮಿ ಯೋಜನೆ

1. **ಗೃಹ ಲಕ್ಷ್ಮಿ ಯೋಜನೆ ಎಂದರೇನು?**

   "ಗೃಹ ಲಕ್ಷ್ಮಿ ಯೋಜನೆ" ಕರ್ನಾಟಕ ಸರ್ಕಾರದ ಪ್ರಮುಖ ಮಹಿಳಾ ಸಬಲೀಕರಣ ಯೋಜನೆಯಾಗಿದೆ. ಈ ಯೋಜನೆಯ ಮೂಲಕ ಪಡಿತರ ಕಾರ್ಡ್ ಹೊಂದಿದ ಕುಟುಂಬದ ಯಜಮಾನಿಗೆ ಮಾಸಿಕ ರೂ. 2000/- ಹಣ ವಿತರಣೆ ಮಾಡಲಾಗುತ್ತದೆ.

2. **ಈ ಯೋಜನೆಗೆ ಯಾರು ಅರ್ಹರು?**

   ಅಂತ್ಯೋದಯ, ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳಲ್ಲಿ ಕುಟುಂಬದ ಯಜಮಾನಿ ಎಂದು ನಮೂದಿಸಿದ ಮಹಿಳೆ ಅರ್ಹಳು.

3. **ಈ ಯೋಜನೆಗೆ ನೋಂದಾಯಿಸುವುದು ಹೇಗೇ?**

   ಅ) ಈ ಯೋಜನೆಯನ್ನು ಬಾಪೂಜಿ ಸೇವಾ ಕೇಂದ್ರ, ಕರ್ನಾಟಕ ಒನ್, ಬೆಂಗಳೂರು ಒನ್, ಗ್ರಾಮ ಒನ್ ಮೂಲಕ ಉಚಿತವಾಗಿ ಅರ್ಜಿ ಸಲ್ಲಿಸಬಹುದು.

   ಬ) ಸ್ಥಳೀಯ ಮಟ್ಟದಲ್ಲಿ ಸರ್ಕಾರದಿಂದ ನೇಮಕವಾದ ಪ್ರಜಾ ಪ್ರತಿನಿಧಿಗಳು ಮನೆಮನೆಗೆ ತೆರಳಿ ಉಚಿತವಾಗಿ ನೋಂದಣಿ ಮಾಡಿಕೊಳ್ಳುತ್ತಾರೆ.

4. **ಯೋಜನೆಗೆ ನೋಂದಾವಣಿ ಯಾವಾಗ ಆರಂಭವಾಗುತ್ತದೆ?**

   ಇಲಾಖೆ ನೀಡಿದ ವಾಟ್ಸಾಪ್ ನಂಬರ್'ಗೆ ನಿಮ್ಮ ರೇಷನ್ ಕಾರ್ಡ್ ನಂಬರ್ ಕಳುಹಿಸಬೇಕು.
   [Ex : GL <Space> ರೇಷನ್ ಕಾರ್ಡ್ ನಂಬರ್ ಅಥವಾ 1902ಗೆ ಕರೆ ಮಾಡಬಹುದು.

5. **ನೋಂದಣಿಗೆ ಕಾಯ್ದಿರಿಸುವ ಸಮಯದ ಮಾಹಿತಿ ಹೇಗೆ ದೊರಕಲಿದೆ?**

   1902 ಸಂಖ್ಯೆಗೆ ಕರೆ ಮಾಡಿದಲ್ಲಿ ಅಥವಾ 8147-500-500 ಸಂಖ್ಯೆಗೆ ಎಸ್.ಎಂ.ಎಸ್. ಮೂಲಕ GL<Space> ರೇಷನ್ ಕಾರ್ಡ್ ನಂಬರ್ ಕಳುಹಿಸಿದಲ್ಲಿ, ಸಂದೇಶದ ಮೂಲಕ ದಿನಾಂಕ, ಸಮಯ ಹಾಗೂ ಸ್ಥಳದ ಮಾಹಿತಿ ದೊರಕಲಿದೆ.

6. **ನಿಗದಿತ ಸಮಯಕ್ಕೆ ನೋಂದಾಯಿಸಲು ಸಾಧ್ಯವಾಗದಿದ್ದಲ್ಲಿ ಅನಂತರ ಅವಕಾಶ ಇದೆಯೇ?**

   ನಿಗದಿತ ಸಮಯಕ್ಕೆ ಭೇಟಿ ಸಾಧ್ಯವಾಗದಿದ್ದಲ್ಲಿ, ಅದೇ ಸ್ಥಳಕ್ಕೆ ಮುಂದಿನ ಯಾವುದೇ ನಿಗದಿತ ದಿನಗಳಲ್ಲಿ, ಕಚೇರಿಯ ಸಮಯದಲ್ಲಿ ತೆರಳಿ ನೋಂದಾಯಿಸಿಕೊಳ್ಳಬಹುದು.

7. **ಯೋಜನೆಗೆ ಸೇವಾ ಕೇಂದ್ರಗಳಿಗೆ ಹೋಗದೇ ನೋಂದಾಯಿಸ ಬಹುದೇ?**

   ಹೌದು. ಸ್ಥಳೀಯ ಮಟ್ಟದಲ್ಲಿ ಸರ್ಕಾರದಿಂದ ನೇಮಕಗೊಂಡ ಪ್ರಜಾಪ್ರತಿನಿಧಿಗಳು ಮನೆಮನೆಗೆ ತೆರಳಿ ಉಚಿತವಾಗಿ ನೋಂದಣಿ ಮಾಡಿಕೊಳ್ಳಲಿದ್ದಾರೆ.

8. **ಈ ಯೋಜನೆ ನೋಂದಾಯಿಸಲು ಸಲ್ಲಿಸಬೇಕಾಗಿರುವ ದಾಖಲೆಗಳು ಯಾವುವು?**

   ರೇಷನ್ ಕಾರ್ಡ್ ಪ್ರತಿ, ಯಜಮಾನಿ ಮತ್ತು ಆಕೆಯ ಪತಿಯ ಆಧಾರ್ ಕಾರ್ಡ್ ಪ್ರತಿ ಮತ್ತು ಯೋಜನೆಯ ನಗದು ಸೌಲಭ್ಯ ಪಡೆಯಲು ಇಚ್ಛಿಸುವ ಬ್ಯಾಂಕ್ ಖಾತೆಯ ಪಾಸ್ ಬುಕ್ ಪ್ರತಿ ಅಗತ್ಯವಿದೆ.

Scanned with CamScanner

**9. ನೋಂದಾಯಿಸಲು ಶುಲ್ಕ ಪಾವತಿಸಬೇಕೆ?**

ಈ ಯೋಜನೆಯ ನೋಂದಣಿ ಸಂಪೂರ್ಣ ಉಚಿತ. (ಯಾವುದೇ ಕಾರಣಕ್ಕೂ ಯಾರಿಗೂ ಹಣ ನೀಡಬೇಡಿ)

**10. ಈ ಯೋಜನೆಗೆ ನೋಂದಾಯಿಸಲು ಕೊನೆಯ ದಿನಾಂಕ ಇದೆಯೇ?**

ಈ ಯೋಜನೆಗೆ ಯಾವುದೇ ಕೊನೆಯ ದಿನಾಂಕದ ಮಿತಿಯಿಲ್ಲ. ಯಾವುದೇ ಸಮಯದಲ್ಲಿ ಬೇಕಿದ್ದರೂ ನೋಂದಾಯಿಸಬಹುದು.

**11. ಈ ಯೋಜನೆಯನ್ನು ಯಾವಾಗಿನಿಂದ ಜಾರಿಗೆ ತರಲಾಗುತ್ತದೆ?**

ಆಗಸ್ಟ 15, 2023 ರ ನಂತರ ಫಲಾನುಭವಿಗಳು ಮೊದಲ ಹಣಕಾಸು ನೆರವು ರೂ. 2000/- ಪಡೆಯಲಿದ್ದಾರೆ.

**12. ತೆರಿಗೆ ಪಾವತಿಸುತ್ತಿದ್ದರೆ ಯೋಜನೆಗೆ ಅರ್ಹರಾ?**

ಇಲ್ಲ. ಕುಟುಂಬದ ಯಜಮಾನಿ ಅಥವಾ ಪತಿ ಆದಾಯ ತೆರಿಗೆ ಪಾವತಿದಾರರಾಗಿದ್ದರೆ, ಆ ಕುಟುಂಬದ ಯಜಮಾನಿಗೆ ಗೃಹ ಲಕ್ಷ್ಮಿ ಯೋಜನೆ ಅನ್ವಯವಾಗುವುದಿಲ್ಲ.

**13. ಜಿಎಸ್‌ಟಿ ರಿಟರ್ನ್ಸ್ ಸಲ್ಲಿಸುವವರು ಅರ್ಹರಾ?**

ಇಲ್ಲ. ಕುಟುಂಬದ ಯಜಮಾನಿ ಅಥವಾ ಪತಿ ಜಿಎಸ್‌ಟಿ ರಿಟರ್ನ್ಸ್ ಸಲ್ಲಿಸುವವರಾಗಿದ್ದರೆ, ಈ ಯೋಜನೆಗೆ ಅರ್ಹರಾಗುವುದಿಲ್ಲ.

**14. ಪಡಿತರ ಚೀಟಿಗೆ ಅರ್ಜಿ ಸಲ್ಲಿಸಿ ಕಾಯುತ್ತಿರುವವರು ಅರ್ಹರೇ?**

ಇಲ್ಲ. ಸದ್ಯದ ಮಾರ್ಗಸೂಚಿ ಪ್ರಕಾರ ಅರ್ಜಿ ಸಲ್ಲಿಸಿ ಕಾಯುತ್ತಿರುವವರು ಅರ್ಹರಲ್ಲ.

**15. ನೋಂದಾಯಿಸಿದ ನಂತರ ನಾನು ಯಾವುದೇ ಸ್ವೀಕೃತಿಯನ್ನು ಪಡೆಯಬಹುದೇ?**

ಹೌದು, ನೋಂದಣಿ ಸಮಯದಲ್ಲಿ ಮೆಸೇಜ್/ಎಸ್.ಎಂ.ಎಸ್ ಅನ್ನು ಗ್ರಾಹಕರಿಗೆ ನೀಡಲಾಗುತ್ತದೆ.

**16. ಫಲಾನುಭವಿಗಳಿಗೆ ಹಣ ಹೇಗೆ ತಲುಪುತ್ತದೆ?**

ಅರ್ಹ ಕುಟುಂಬದ ಯಜಮಾನಿಯ ಬ್ಯಾಂಕ್ ಖಾತೆಗೆ ನೇರ ನಗದು ವರ್ಗಾವಣೆ (DBT) ಅಥವಾ ಆರ್.ಟಿ.ಜಿ.ಎಸ್ (RTGS) ಮೂಲಕ ಮಾಸಿಕ ರೂ. 2000/- ವಿತರಿಸಲಾಗುತ್ತದೆ.

**17. ಯಾರನ್ನು ಮನೆಯ ಯಜಮಾನಿ ಎಂದು ಪರಿಗಣಿಸಲಾಗುತ್ತದೆ?**

ರೇಷನ್ ಕಾರ್ಡ್'ನಲ್ಲಿ ನಮೂದಿಸಿರುವ ಮನೆಯ ಯಜಮಾನಿಯನ್ನೇ 'ಗೃಹಲಕ್ಷ್ಮಿ' ಯೋಜನೆಯ ಫಲಾನುಭವಿ ಎಂದು ಪರಿಗಣಿಸಲಾಗುತ್ತದೆ.

**18. ಕುಟುಂಬದ ಯಜಮಾನಿ ಬೇರೆ ಸದಸ್ಯರ ಬ್ಯಾಂಕ್ ಖಾತೆ ನೀಡಬಹುದಾ?**

ಇಲ್ಲ. ಕುಟುಂಬದ ಯಜಮಾನಿ ತಮ್ಮದೇ ಬ್ಯಾಂಕ್ ಖಾತೆಯನ್ನು ನೀಡಬೇಕು.

Scanned with CamScanner

19. ಪಡಿತರ ಚೀಟಿಯಲ್ಲಿ ಅತ್ತೆ ಯಾಜಮಾನಿಯಾಗಿದ್ದು, ಸದಸ್ಯರ ಪಟ್ಟಿಯಲ್ಲಿ ಸೊಸೆಯ ಹೆಸರಿದ್ದು, ಸೊಸೆಯನ್ನೇ ಫಲಾನುಭವಿಯನ್ನಾಗಿಸುವ ಸೌಲಭ್ಯವಿದೆಯೇ?

ಇಲ್ಲ, ಪಡಿತರ ಚೀಟಿಯಲ್ಲಿಯ ಯಜಮಾನಿಯೇ ಈ ಯೋಜನೆಯ ಫಲಾನುಭವಿಯಾಗಿರುತ್ತಾರೆ.

20. ಕುಟುಂಬದ ಮುಖ್ಯಸ್ಥರಿಗಾಗಿ ನಾವು ಈಗ ರೇಷನ್ ಕಾರ್ಡ್ ನಲ್ಲಿ ಬದಲಾವಣೆಗಳನ್ನು ಮಾಡಬಹುದೇ. (ಉದಾ: ಪತಿ ಕುಟುಂಬದ ಮುಖ್ಯಸ್ಥ)

ಬದಲಾವಣೆ ಸಾಧ್ಯ. ಪಡಿತರ ಚೀಟಿಯಲ್ಲಿ ಈಗಾಗಲೇ ನಮೂದಿಸಿರುವ ಕುಟುಂಬದ ಯಜಮಾನಿ ಮಹಿಳೆಗೆ ಸೌಲಭ್ಯ ನೀಡಲಾಗುವುದು.

21. ಮಂಗಳಮುಖಿಯರು ಗೃಹಲಕ್ಷ್ಮಿ ಯೋಜನೆಗೆ ನೋಂದಾಯಿಸಿಕೊಳ್ಳಬಹುದೇ ?

ಹೌದು, ಮಂಗಳಮುಖಿಯರು ಪಡಿತರ ಚೀಟಿಯಲ್ಲಿ ಮನೆ ಯಜಮಾನಿ ಎಂದು ಘೋಷಿತವಾಗಿದ್ದರೆ ನೊಂದಾಯಿಸಿಕೊಳ್ಳಬಹುದು.

22. ಗಂಡ ಮತ್ತು ಹೆಂಡತಿ ಜಂಟಿ ಖಾತೆಯನ್ನು ಹೊಂದಿದ್ದರೆ, ಜಂಟಿ ಖಾತೆ ವಿವರಗಳನ್ನು ನೊಂದಾಯಿಸಲು ಒದಗಿಸಬಹುದೇ?

ಇಲ್ಲ, ಯೋಜನೆಯಡಿ ನೊಂದಾಯಿಸಿಕೊಳ್ಳುವವರು ಹೊಸ ಬ್ಯಾಂಕ್ ಖಾತೆಯನ್ನು ತೆರೆದು ಪಾಸ್ ಪುಸ್ತಕದ ಪ್ರತಿಯನ್ನು ಒದಗಿಸಬೇಕು.

23. ತಾಯಿ ಕುಟುಂಬದ ಮುಖ್ಯಸ್ಥೆಯಾಗಿದ್ದರೆ ಮತ್ತು ಇತ್ತೀಚೆಗೆ ಮಹಿಳೆ ನಿಧನರಾದರೆ, ಈ ಸನ್ನಿವೇಶದಲ್ಲಿ ಏನು ಮಾಡಬಹುದು?

ಪಡಿತರ ಚೀಟಿಯಲ್ಲಿ ಅಗತ್ಯ ತಿದ್ದುಪಡಿಯಾದ ನಂತರ ನೊಂದಾಯಿಸಬಹುದು.

24. ಮಗ/ಮಗಳು ತೆರಿಗೆ ಪಾವತಿದಾರನಾಗಿದ್ದರೆ ಅಥವಾ ಐಟಿ ರಿಟರ್ನ್ಸ್ ಸಲ್ಲಿಸಿದ್ದರೆ, ತಾಯಿ ಗೃಹಲಕ್ಷ್ಮಿ ಯೋಜನೆಗೆ ಅರ್ಹರಾಗುತ್ತಾರೆಯೇ?

ಹೌದು ಅರ್ಹರಾಗುತ್ತಾರೆ.

25. ನಾನು ರಾಷ್ಟ್ರೀಕೃತ / ಷೆಡ್ಯೂಲ್ಡ್ ಬ್ಯಾಂಕಿನಲ್ಲಿ ಖಾತೆಯನ್ನು ಹೊಂದಿದ್ದೇನೆ, ನಾನು ಗೃಹಲಕ್ಷ್ಮಿ ಯೋಜನೆಗೆ ಖಾತೆಯನ್ನು ಬಳಸಬಹುದೇ ?

ಹೌದು, ಬಳಸಬಹುದು.

26. ತಪ್ಪು ಮಾಹಿತಿ ನೀಡಿ ಸೌಲಭ್ಯ ಪಡೆದಿರುವುದು ಕಂಡುಬಂದಲ್ಲಿ ಏನು ಮಾಡಲಾಗುವುದು?

ಈಗಾಗಲೇ ಪಾವತಿಸಲಾಗಿರುವ ಹಣವನ್ನು ಫಲಾನುಭವಿಗಳಿಂದ ವಸೂಲು ಮಾಡಲಾಗುವುದು ಮತ್ತು ಅಂತಹವರ ವಿರುದ್ಧ ಕಾನೂನು ರೀತಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

27. ಕುಟುಂಬದ ಯಜಮಾನಿಯು ಮರಣ ಹೊಂದಿದ್ದಲ್ಲಿ ಮುಂದಿನ ಕ್ರಮವೇನು?

ಕುಟುಂಬದ ಯಜಮಾನಿಯು ಮರಣ ಹೊಂದಿದ್ದಲ್ಲಿ ಯೋಜನೆಯ ಸೌಲಭ್ಯ ಸ್ಥಗಿತಗೊಳಿಸಲಾಗುವುದು.

Scanned with CamScanner

28. ಆಧಾರ್ ಮತ್ತು ಪಡಿತರ ಚೀಟಿಯಲ್ಲಿ ಹೆಸರು/ವಿಳಾಸ ಹೊಂದಿಕೆಯಾಗದಿದ್ದರೆ ಅಂತಹವರನ್ನು ನೊಂದಣಿ ಮಾಡಿಕೊಳ್ಳಲಾಗುತ್ತದೆಯೇ? ನೊಂದಣಿ ಪ್ರಕ್ರಿಯೆಗೊಳಿಸಲಾಗುತ್ತದೆಯೇ?

ಈಗಾಗಲೇ ಆಧಾರ್ ಮತ್ತು ಪಡಿತರ ಚೀಟಿ ಜೋಡಣೆಯಾಗಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

29. ಯೋಜನೆಯಡಿ ನೊಂದಾಯಿಸಿಕೊಳ್ಳಲು ಗಂಡನ ವಿವರಗಳು ಕಡ್ಡಾಯವಾಗಿದೆ. ವಿಚ್ಛೇದನದ ಪ್ರಕರಣವು ಬಾಕಿ ಉಳಿದಿದ್ದರೆ ಅಥವಾ ನ್ಯಾಯಾಲಯದಲ್ಲಿ ಪ್ರಕ್ರಿಯೆಯಲ್ಲಿದ್ದರೆ ಏನು ಮಾಡಬೇಕು?

ಕಾನೂನು ರೀತಿ ವಿಚ್ಛೇದನ ಆಗಿದ್ದಲ್ಲಿ ಗಂಡನ ವಿವರಗಳನ್ನು ಸಲ್ಲಿಸುವ ಅಗತ್ಯವಿಲ್ಲ.

30. ನಾಗರಿಕರು ಆಸ್ತಿ ತೆರಿಗೆಯನ್ನು ಪಾವತಿಸುತ್ತಿದ್ದರೆ ಅವರು ನೊಂದಾಯಿಸಿಕೊಳ್ಳಲು ಅರ್ಹರಾಗುತ್ತಾರೆಯೇ?

ಹೌದು, ಅರ್ಹರಿರುತ್ತಾರೆ.

31. ನಾಗರಿಕರು ಅಂಗವಿಕಲರಾಗಿದ್ದರೆ ಮತ್ತು ಕೇಂದ್ರಗಳಿಗೆ ಭೇಟಿ ನೀಡಲು ಸಾಧ್ಯವಾಗದಿದ್ದರೆ ಮತ್ತು ನಾಗರಿಕನು ಅಶಿಕ್ಷಿತರಾಗಿದ್ದರೆ ಕುಟುಂಬದ ಸದಸ್ಯರು Offline ನಲ್ಲಿ ನೊಂದಾಯಿಸಬಹುದೇ?

ಸ್ಥಳೀಯ ಮಟ್ಟದಲ್ಲಿ ಸರ್ಕಾರದಿಂದ ನೇಮಕಗೊಂಡ, ಮನೆಮನೆಗೆ ತೆರಳಿ ಉಚಿತವಾಗಿ ನೊಂದಣಿ ಮಾಡಿಕೊಳ್ಳುವ ಪ್ರಜಾಪತಿನಿಧಿಗಳ ಮೂಲಕ ನೊಂದಾಯಿಸಿಕೊಳ್ಳಬಹುದು.

32. ನಾಗರಿಕರು ಸರ್ಕಾರಿ ವಲಯದಲ್ಲಿ ಕೆಲಸ ಮಾಡಿದ್ದರೆ, ಈಗ ಅವರು ನಿವೃತ್ತರಾಗಿದ್ದರೆ ಮತ್ತು ಪಿಂಚಣಿ ಪಡೆಯುತ್ತಿರುವವರು ಯೋಜನೆಗೆ ನೊಂದಾಯಿಸಿಕೊಳ್ಳಲು ಅರ್ಹರಾಗುತ್ತಾರೆಯೇ?

ಅವರು ಯಾವುದೇ ಆದಾಯ ತೆರಿಗೆಯನ್ನು ಪಾವತಿಸದಿದ್ದರೆ ಅರ್ಹರಾಗುತ್ತಾರೆ.

33. ನಾಗರಿಕರು ಸಾರ್ವಜನಿಕ ವಲಯದಲ್ಲಿ ಕೆಲಸ ಮಾಡಿದ್ದರೆ, ಈಗ ಅವರು ನಿವೃತ್ತರಾಗಿದ್ದು, ಪಿಂಚಣಿ ಪಡೆಯುತ್ತಿರುವವರು ಯೋಜನೆಗೆ ನೊಂದಾಯಿಸಿಕೊಳ್ಳಲು ಅರ್ಹರಾಗುತ್ತಾರೆಯೇ

ಅವರು ಯಾವುದೇ ಆದಾಯ ತೆರಿಗೆಯನ್ನು ಪಾವತಿಸದಿದ್ದರೆ ಅರ್ಹರಾಗುತ್ತಾರೆ.

34. ಕುಟುಂಬದ ಮುಖ್ಯಸ್ಥರಿಗಾಗಿ ನಾವು ಈಗ ರೇಷನ್ ಕಾರ್ಡ್ ನಲ್ಲಿ ಬದಲಾವಣೆಗಳನ್ನು ಮಾಡಬಹುದೇ. (ಉದಾ: ಪತಿ ಕುಟುಂಬದ ಮುಖ್ಯಸ್ಥ)

ನಿಯಮಾನುಸಾರ ಸದರಿ ಪಡಿತರ ಚೀಟಿಯಲ್ಲಿ ಕುಟುಂಬದ ಯಜಮಾನಿ ಮಹಿಳೆ ಎಂದು ಬದಲಾದಲ್ಲಿ ಯೋಜನೆಗೆ ನೊಂದಾಯಿಸಿಕೊಳ್ಳಬಹುದು. ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಲ್ಲಿ ವಿಚಾರಿಸಬಹುದು.

** ** **

Scanned with CamScanner